# ಪ್ರಥಮ ಪಿಯುಸಿ ಮಾದರಿ ಪ್ರಶ್ನೆಪತ್ರಿಕೆ – 1

**2020–21**

**(ಕಡಿತಗೊಂಡ ಪಠ್ಯ ಕ್ರಮಕ್ಕೆ ಅನುಗುಣವಾಗಿ)**

ವಿಷಯ:ಕನ್ನಡ

ಅವಧಿ : 3–15ಗಂಟೆ ಗರಿಷ್ಠ ಅಂಕಗಳು : 100

---

## ಅ – ವಿಭಾಗ

**I. ಈ ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ : 1 x 10=10**

1. ದಿವ್ಯಜ್ಞಾನಿ ಎಂದು ಯಾರನ್ನು ಕರೆಯಲಾಗಿದೆ?
2. ರಾಮನ ಆಜ್ಞೆ ಏನು?
3. ಮಗುವು ಯಾವುದರ ಹಾಗೆ ಬಾಗಬೇಕು?
4. ಸಮಾಧಿಗಳು ಯಾರನ್ನು ಬಚ್ಚಿಟ್ಟುಕೊಂಡಿವೆ?
5. ಹಲಸಿನ ಮರ ಮಾರಿದ್ದರಿಂದ ಕರಿಸಿದ್ದೇಗೌಡನಿಗೆ ಸಿಕ್ಕ ಹಣವೆಷ್ಟು?
6. ನೀರಿಗಾಗಿ ಕರಿಯ ಏನನ್ನು ತರುತ್ತಿದ್ದ?
7. ಯಾವುದು ಹಾಸ್ಯಾಸ್ಪದ ಸಂಗತಿ?
8. ಬೋಳೇಶಂಕರನ ಊರು ಯಾವುದು?
9. ಅಣ್ಣಂದಿರಿಗೆ ಯಾವ ರೋಗ ಹಿಡಿದಿದೆಯೆಂದು ಬೋಳೇಶಂಕರ ಹೇಳುತ್ತಾನೆ?
10. ಕತ್ತಲೆಯ ನಿಜ ಜನಕನು ಯಾರು?

## ಆ – ವಿಭಾಗ

**II.ಅ) ಈ ಕೆಳಗಿನವುಗಳಲ್ಲಿ ನಾಲ್ಕುಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x4=8**

11. ತನು ಮನ ಧನಗಳನ್ನು ಮರೆಯಲು ಏನನ್ನು ತೋರುತ್ತಾರೆ?
12. ಮಾದೇವ ತನ್ನ ಶಿಶುಮಕ್ಕಳಿಗೆ ಏನೇನು ನೀಡಿ ಸಲಹಿದನು?
13. ನಾಡಿನ ಹೊರಗಿನ ಮತ್ತು ಒಳಗಿನ ಕಳ್ಳರು ಯಾರು?
14. ಹೊಟ್ಟೆಯೊಳಗಿನ ಮಗುವು ಯಾವ ವರವನ್ನು ಬೇಡುತ್ತದೆ?
15. ನಗುವ ಚಂದಿರ ಏಕೆ ಕೈಗಂಟಿಕೊಳ್ಳುತ್ತಿದ್ದಾನೆ?

**ಆ) ಈ ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x3=6**

16. ಜ್ಯೋತಿಷ್ಯದ ಪ್ರಕಾರ ಗ್ರಹಗಳೆಷ್ಟು? ಅವುಗಳು ಯಾವುವು?

17. ನಿರೂಪಕರ ಓರೆಕೋರೆಗಳನ್ನು ತಿದ್ದಿದ ಗುರುಗಳು ಯಾರ್ಯಾರು?

18. ನೇಪಾಳದ ವೈಮಾನಿಕ ಸಾರಿಗೆ ವ್ಯವಸ್ಥೆ ಹೇಗಿದೆ?

19. ರಂಗರಾವ್ ಸಮಾಧಿಯ ಮೇಲೆ ಬರೆದ ಹೇಳಿಕೆ ಯಾವುದು?

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x3=6**

20. ಬೆಟ್ಟದ ಮೇಲಿನ ದೇವತೆಯು ಬೋಳೇಶಂಕರನ ಅಣ್ಣ ಅತ್ತಿಗೆಯರಿಗೆ ಹೇಗೆ ಕಾಣಿಸುತ್ತದೆ?

21. ಕೋಡಂಗಿಯು ತಾನು ಬೆಳಗ್ಗೆಯಿಂದ ಏನೇನು ಕೆಲಸ ಮಾಡಿದೆನೆಂದು ಹೇಳುತ್ತಾನೆ?

22. ಬೋಳೇಶಂಕರ ಹುಡುಗಿಯರಿಗೆ ಚಿನ್ನ ಕೊಟ್ಟಿದ್ದಕ್ಕೆ ಸಾವ್ಕಾರಣ್ಣನು ಏನು ಹೇಳುತ್ತಾನೆ?

23. ಸೈತಾನನಿಗೆ ಮೊದಲ ಪಂಕ್ತಿಯ ಊಟ ನಿರಾಕರಿಸಿದ್ದು ಏಕೆ?

## ಇ–ವಿಭಾಗ

**III. ಅ) ಈ ಕೆಳಗಿನವುಗಳಲ್ಲಿಯಾವುದಾದರು ಎರಡು ವಾಕ್ಯಗಳನ್ನು ಕುರಿತು ಸಂದರ್ಭಸೂಚಿಸಿ, ಸ್ವಾರಸ್ಯ ಬರೆಯಿರಿ 3x2=6**

24. ನೀ ದೇವನಾದಡೆ ಎನ್ನನೇಕೆ ಸಲಹೆ?

25. ಎಲ್ಲರಿಗೂ ದಕ್ಕುವ ಎಲಚಿಯಾಗು.

26. ಕಂಡಿಲ್ಲ ನಾನಿನ್ನೂ ಬದಕಿನಾಗಸದ ನೀಲ

**ಆ) ಈ ಕೆಳಗಿನವುಗಳಲ್ಲಿಯಾವುದಾದರು ಒಂದು ವಾಕ್ಯವನ್ನು ಕುರಿತು ಸಂದರ್ಭಸೂಚಿಸಿ, ಸ್ವಾರಸ್ಯ ಬರೆಯಿರಿ. 3x1=3**

27. ಅದು ಪದಗಳಿಗೆ ನಿಲುಕದ ರಸಾನುಭವ

28. ಇನ್ನು ಮುಂದೆ ಅನಗತ್ಯವಾಗಿ ಕೋಪಿಸಿಕೊಳ್ಳುವುದಿಲ್ಲ.

**ಇ) ಈ ಕೆಳಗಿನವುಗಳಲ್ಲಿ ಯಾವುದಾದರು ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. 3x1=3**

29. ಹಸಿರು ಸಾಮ್ರಾಜ್ಯದ ನಮ್ರ ಪ್ರಜೆ ಕಾಣಯ್ಯ ನಾನು.

30. ಬಂಧುಗಳೇ ಚರಿತ್ರೆ ಮುಂದೆ ಮುಂದೆ ಹೋಗುತ್ತದೆ, ಹಿಂದೆ ಹಿಂದಲ್ಲ.

## ಈ – ವಿಭಾಗ

**IV. ಅ)ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 4x3=12**

31. ಬದುಕು ಸಾರ್ಥಕವಾಗಬೇಕಾದರೆ ಯಾವ ಅಂಶಗಳು ಇರಬೇಕೆಂದು ಅಕ್ಕಮಹಾದೇವಿ ಹೇಳುತ್ತಾಳೆ?

32. ಚೆನ್ನಯ್ಯನಿಗೆ ಶಿವನು ಗಣಪದವಿಯನ್ನು ನೀಡಿದ ಪ್ರಸಂಗವನ್ನು ನಿರೂಪಿಸಿ.

33. ವಾಲ್ಮೀಕಿ ಸೀತೆಯನ್ನು ಹೇಗೆ ಸಂತೈಸುತ್ತಾನೆ?

34. ಕನಕದಾಸರು 'ತಲ್ಲಣಿಸದಿರು ಮನವೇ' ಎನ್ನಲು ಕಾರಣವೇನು?

**ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.** **4x2=8**

35. ವೈದ್ಯಾಧಿಕಾರಿ ಮತ್ತು ಆಸ್ಪತ್ರೆಯ ಸಿಬ್ಬಂದಿಗಳು ಗಾಂಧಿಯನ್ನು ನಡೆಸಿಕೊಂಡ ರೀತಿಯನ್ನು ನಿರೂಪಿಸಿರಿ.

36. ಅವಳಿ ಮಕ್ಕಳ ಸಾವು ಮಾಸ್ತರರ ಬದುಕನ್ನೇ ಬದಲಾಯಿಸಿದ್ದು ಹೇಗೆ? ವಿವರಿಸಿ.

37. ಶಕುಂತಲೆ ತನ್ನ ಬದುಕನ್ನು ಅರ್ಥೈಸಿಕೊಂಡದ್ದು ಹೇಗೆ? ತಿಳಿಸಿ.

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.** **4x2=8**

38. ಬೋಳೇಶಂಕರನ ಅಣ್ಣಂದಿರೇ ವಾಸಿ ಎಂದು ಪಿಶಾಚಿ ಹೇಳಲು ಕಾರಣವೇನು?

39. ರಾಜಕುಮಾರಿಯ ಹೊಟ್ಟೆನೋವು ಪ್ರಸಂಗದಿಂದ ಬೋಳೇಶಂಕರ ರಾಜನಾದ ಕಥೆಯನ್ನು ತಿಳಿಸಿ.

40. ಯುದ್ಧ ಮಾಡಲು ಸೈನಿಕರು ಏಕೆ ನಿರಾಕರಿಸುತ್ತಾರೆ?

## ಉ – ವಿಭಾಗ

**V. ಅ) ಈ ಕೆಳಗಿನವುಗಳಲ್ಲಿ ಯವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ.** **5x1=5**

41. ಅಸಮಬಲ ಭವದ್ವಿಕ್ರಮ
ಮಸಂಭವಂ ಪೆಱರ್ಗೆ ನಿನ್ನನಾನಿನಿತಂ ಪ್ರಾ
ರ್ಥಿಸುವೆನಭಿಮನ್ಯು ನಿಜ ಸಾ
ಹಸೈಕದೇಶಾನುಮರಣಮೆಮಗಕ್ಕೆ ಗಡಾ

42. ಅಖಂಡ ಕರ್ಣಾಟಕ:

ಅಲ್ತೊ ನಮ್ಮ ಬೂಟಾಟದ ರಾಜಕೀಯ ನಾಟಕ
ಇಂದು ಬಂದು ನಾಳೆ ಸಂದು
ಹೋಹ ಸಚಿವ ಮಂಡಲ
ರಚಿಸುವೊಂದು ಕೃತಕವಲ್ತೊ
ಸಿರಿಗನ್ನಡ ಸರಸ್ವತಿಯ
ವಜ್ರಕರ್ಣ ಕುಂಡಲ!

## ಭಾಷಾಭ್ಯಾಸ

**VI.** ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗನುಗುಣವಾಗಿ ಉತ್ತರಿಸಿ. **2x6=12**

**43.** ಈ ಪದಗಳಿಗೆ ಅರ್ಥ ಬರೆಯಿರಿ : ತಗಹು, ಹುರುಡು.

**44.** ಎರಡು ಅನ್ಯದೇಶ್ಯ ಶಬ್ದಗಳನ್ನು ಬರೆಯಿರಿ.

**45.** ಈ ಪದಗಳ ತದ್ಭವ ರೂಪ ಬರೆಯಿರಿ : ಪರ್ವ, ರತ್ನ

**46.** ಈ ಪದಗಳನ್ನು ಬಿಡಿಸಿ ಬರೆಯಿರಿ : ಗುಪ್ತಾರಾಧನೆ, ಉಂಡೆಗಟ್ಟುವ

**47.** ಈ ಪದಗಳ ವಿರುದ್ಧಾರ್ಥವನ್ನು ಬರೆಯಿರಿ : ಉನ್ನತಿ, ಖಂಡ

**48.** ಈ ಪದಗಳ ಸಮಾನಾರ್ಥಗಳನ್ನು ಬರೆಯಿರಿ : ಇಳೆ, ಗಾಳಿ

**49.** ಈ ದ್ವಿರುಕ್ತಿಗಳನ್ನು ಬಳಸಿ ಸ್ವಂತವಾಕ್ಯ ರಚಿಸಿರಿ : ಸಿಲ್ಕಿಸಿಲ್ಕಿ , ದಾರುದಾರುಣ

**ಆ) ಈ ಕೆಳಗಿನವುಗಳಲ್ಲಿ ಒಂದನ್ನು ಕುರಿತು ಪ್ರಬಂಧವನ್ನು ಬರೆಯಿರಿ.** **5x1=5**

**50.** ಸಾಂಕ್ರಾಮಿಕ ರೋಗಗಳ ಬಗ್ಗೆ ನಾವು ವಹಿಸಬೇಕಾದ ಮುನ್ನೆಚ್ಚರಿಕೆಗಳು

**51.** ಬದುಕುವ ಕಲೆ

**ಇ) ಪತ್ರಲೇಖನ : ಈ ಕೆಳಗಿನವುಗಳಲ್ಲಿ ಒಂದನ್ನು ಕುರಿತು ಪತ್ರ ಬರೆಯಿರಿ.** **4x1=4**

**52.** ಶೈಕ್ಷಣಿಕ ಪ್ರವಾಸಕ್ಕೆ ಅನುಮತಿ ಕೋರಿ ತಂದೆಗೊಂದು ಪತ್ರ ಬರೆಯಿರಿ.

**53.** ಐದು ದಿನಗಳ ರಜೆಯನ್ನು ಮಂಜೂರು ಮಾಡುವಂತೆ ಕೋರಿ ಪ್ರಾಂಶುಪಾಲರಿಗೊಂದು ಪತ್ರ ಬರೆಯಿರಿ.

**ಈ) ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ.** **4x1=4**

**54.** ಅಂಗೈ ಹುಣ್ಣಿಗೆ ಕನ್ನಡಿ ಬೇಕೆ?

**55.** ಮಾಡಿದ್ದುಣ್ಣೋ ಮಹಾರಾಯ.

##############################################

# ಪ್ರಥಮ ಪಿಯುಸಿ ಮಾದರಿ ಪ್ರಶ್ನೆಪತ್ರಿಕೆ – 2

**2020–21**

**(ಕಡಿತಗೊಂಡ ಪಠ್ಯ ಕ್ರಮಕ್ಕೆ ಅನುಗುಣವಾಗಿ)**

**ವಿಷಯ : ಕನ್ನಡ**

**ಅವಧಿ : 3–15ಗಂಟೆ** **ಗರಿಷ್ಠ ಅಂಕಗಳು : 100**

---

## ಅ – ವಿಭಾಗ

**I. ಈ ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣವಾಕ್ಯದಲ್ಲಿ ಉತ್ತರಿಸಿ :** **1x10=10**

1. ಪಿನಾಕಪಾಣಿ ಎಂದರೆ ಯಾರು?
2. ನಗೆಗೆ ಈಡಾಗುವುದು ಯಾವುದು?
3. ರಾವಣಾರಿ ಎಂದರೆ ಯಾರು?
4. ನಾಡು ಯಾವುದಕ್ಕೆ ತಾಳ ಹೊಡೆದಿದೆ?
5. ಕುಟುಂಬ ಯೋಜನಾ ವಿಸ್ತರಣಾಧಿಕಾರಿಯ ಹೆಸರೇನು?
6. ಸೇಂಗಾ ಮಾರುವವನ ದಿನದ ಸಂಪಾದನೆ ಎಷ್ಟು?
7. ಶಕುಂತಲೆಯ ಅಂತಃಪುರದಿಂದ ದುಷ್ಯಂತ ಹೊರನಡೆದದ್ದು ಹೇಗೆ?
8. ಬೋಳೇಶಂಕರನ ಅಣ್ಣ ಅತ್ತಿಗೆಯರಿಗೆ ಉಂಟಾದ ಆಸೆ ಯಾವುದು?
9. ಪಿಶಾಚಿಗಳು ಯಾರ ಹೆಸರು ಕೇಳಿದರೆ ಹೆದರುತ್ತವೆ?
10. ಸೈನಿಕರು ಯಾವುದಕ್ಕೆ ಜಯವಾಗಲಿ ಎಂದು ಹಾಡಿದರು?

## ಆ – ವಿಭಾಗ

**II.ಅ) ಈ ಕೆಳಗಿನವುಗಳಲ್ಲಿ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ.** **2x4=8**

11. ಕರ್ಣನ ಜನ್ಮ ರಹಸ್ಯವನ್ನು ಯಾರು ಯಾರು ಅರಿತಿದ್ದರು?
12. ರತ್ನ ಮತ್ತು ಮುತ್ತು ಏನನ್ನು ಸೂಚಿಸುತ್ತವೆ?
13. ಶಿಶು ಮಕ್ಕಳು ಬಾಯಿಬಾಯಿ ಏಕೆ ಬಡಿದುಕೊಳ್ಳುತ್ತಾರೆ?
14. ರಾಕ್ಷಸಗಣ ಹತ್ಯೆಗೆ ಜನತೆ ಹೇಗೆ ಹೆಜ್ಜೆ ಇಡಬೇಕು ?
15. ಅರಳಿಸಿದ ದಾಳಿಂಬೆ ಯಾವ ರೀತಿ ಕಾಣುತ್ತದೆ?

**ಆ) ಈ ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ.** **2x3=6**

16. ಗಾಂಧಿ ಎಂಬ ಹುಡುಗನ ಕೊನೆಯ ಆಸೆ ಯಾವುದು?

17. ನಮ್ಮ ಯಾವ ಯಾವ ಜಿಲ್ಲೆಗಳು ರಾಗಿಯ ಕಣಜಗಳು?

18. ಮಹಾನ್ ವ್ಯಕ್ತಿಗಳ ದರ್ಶನ ಅರ್ಥವಾಗುವುದು ಹೇಗೆ?

19. ಡಿ.ಸಿ.ಎಂ. ಸಂಸ್ಥೆಗೆ ಯಾರು ಯಾರು ಭೇಟಿ ನೀಡಿದ್ದರು?

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ.2x3=6**

20. ಸಾವ್ಕಾರಣ್ಣನು ತನ್ನ ಸಹೋದರರಿಗೆ ಆಸ್ತಿಯನ್ನು ಹೇಗೆ ಹಂಚಿದ?

21. ಸೈತಾನನು ಮೂರು ಪಿಶಾಚಿಗಳನ್ನು ಭೂಲೋಕಕ್ಕೆ ಕಳುಹಿಸಿದ್ದು ಏಕೆ?

22. ಸೈತಾನನ ಆಗಮನವನ್ನು ಭಾಗವತ ಹೇಗೆ ತಿಳಿಸಿದ್ದಾನೆ?

23. ಬೋಳೇಶಂಕರ ಏನೆಂದು ಡಂಗುರ ಸಾರಿಸುತ್ತಾನೆ?

## ಇ -ವಿಭಾಗ

**III.ಅ) ಈ ಕೆಳಗಿನವುಗಳಲ್ಲಿಯಾವುದಾದರು ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. 3x2=6**

24. ಎಲ್ಲರನು ಸಲಹುವನು ಇದಕೆ ಸಂಶಯವಿಲ್ಲ

25. ಕಾಯಿಯಲ್ಲೇ ನಿನ್ನ ಕೆಡವದಿರಲಿ.

26. ಮುಟ್ಟಿಸಿಕೊಳ್ಳದೆ ಪವಿತ್ರನಾಗಿರಬೇಕೆಂದುಕೊಂಡಿದ್ದೇನೆ.

**ಆ) ಈ ಕೆಳಗಿನವುಗಳಲ್ಲಿಯಾವುದಾದರು ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. 3x1=3**

27. ನನ್ನ ದೇಹದ ಮೇಲೆ ಒಂದು ಮುಷ್ಟಿ ರಾಗಿ ಸುರಿಯಿರಿ.

28. ಗವಾಕ್ಷಿಯಿಂದ ಮಗನನ್ನು ಕೂಗಿರಬಹುದು.

**ಇ) ಈ ಕೆಳಗಿನವುಗಳಲ್ಲಿಯಾವುದಾದರು ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ.3x1=3**

29. ಇವನಿಗೇನು ಹೆಂಡತೀನೇ? ಮಕ್ಕಳೇ?

30. ಜನ ಎಲ್ಲಿ ಸೇರಿದರೆ ಅಲ್ಲೇ ದರ್ಬಾರು

## ಈ – ವಿಭಾಗ

**IV. ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.4x3=12**

**31.** ದುರ್ಯೋಧನನು ದುಶ್ಯಾಸನನನ್ನು ಕಂಡು ವ್ಯಕ್ತಪಡಿಸಿದ ಭಾವನೆಗಳು ಯಾವುವು?

**32.** ಚೆನ್ನಯ್ಯ ತನ್ನ ಕಾಯಕವನ್ನು ಹೇಗೆ ಮಾಡುತ್ತಿದ್ದನು?

**33.** ಸರಸ್ವತಿಯ ಸಚಿವ ಮಂಡಲವನ್ನು ಕುರಿತು ಬರೆಯಿರಿ.

**34.** 'ನಾ ಬರಿ ಭ್ರೂಣವಲ್ಲ' ಕವಿತೆಯಲ್ಲಿ ಸ್ತ್ರೀ ಸಂವೇದನೆ ಹೇಗೆ ವ್ಯಕ್ತವಾಗಿದೆ?

**ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 4x2=8**

**35.** ಜ್ಯೋತಿಷ್ಯ ಏಕೆ ವಿಜ್ಞಾನವಾಗಲಾರದು? ವಿವರಿಸಿ.

**36.** ಶಾಸ್ತ್ರಿಮಾಸ್ತರರ ವ್ಯಕ್ತಿತ್ವವನ್ನು ನಿರೂಪಿಸಿ.

**37.** ಪುರುಷ ಸಮಾಜದ ಬಗ್ಗೆ ಶಕುಂತಲೆಯ ನಿಲುವೇನು?

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 4x2=8**

**38.** ಬೋಳೇಶಂಕರ ಮತ್ತು ಅವನ ಅಣ್ಣಂದಿರನ್ನು ಭಾಗವತರು ಹೇಗೆ ಪರಿಚಯಿಸುತ್ತಾರೆ?

**39.** ಬೋಳೇಶಂಕರ ನಾಣ್ಯ ಹಾಗೂ ಸೈನಿಕರನ್ನು ಪಡೆದ ಪ್ರಸಂಗವನ್ನು ವಿವರಿಸಿ.

**40.** 'ಹಸಿರೇ ಉಸಿರು' ಎಂಬುದನ್ನು ಬೋಳೇಶಂಕರನ ಪಾತ್ರದ ಮೂಲಕ ನಾಟಕಕಾರರು ಹೇಗೆ ಸ್ಪಷ್ಟಪಡಿಸಿದ್ದಾರೆ? ವಿಮರ್ಶಿಸಿ.

## ಉ – ವಿಭಾಗ

**V. ಅ)ಈ ಕೆಳಗಿನವುಗಳಲ್ಲಿ ಯವುದಾದರೂಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ. 5x1=5**

**41.** ಕಾಲುಗಳೆಂಬವು ಗಾಲಿ ಕಂಡಯ್ಯಾ,
ದೇಹವೆಂಬುದು ತುಂಬಿದ ಬಂಡಿ ಕಂಡಯ್ಯಾ,
ಬಂಡಿಯ ಹೊಡೆವವರೈವರೂ ಮಾನಿಸರು,
ಒಬ್ಬರಿಗೊಬ್ಬರು ಸಮವಿಲ್ಲಯ್ಯ,
ಅದರಿಚ್ಛೆಯನರಿದು ಹೊಡೆಯದಿರ್ದಡೆ,
ಅದರಚ್ಚು ಮುರಿಯಿತ್ತು, ಗುಹೇಶ್ವರಾ.

42. ಬಿರುಗಾಳಿ ಪೊಡೆಯಲ್ಕೆ ಕಂಪಿಸಿ ಫಲಿತ ಕದಳಿ
ಮುರಿದಿಳೆಗೊರಗುವಂತೆ ಲಕ್ಷ್ಮಣನ ಮಾತು ಕಿವಿ
ದೆರೆಗೆ ಬೀಳದ ಮುನ್ನ ಹಮ್ಮೈಸಿ ಬಿದ್ದಳಂಗನೆ ಧರೆಗೆ ನಡುನಡುಗುತ
ಮರೆದಳಂಗೋಪಾಂಗಮಂ ಬಳಿಕ ಸೌಮಿತ್ರಿ
ಮರುಗಿ ತಣ್ಣೀರ್ದಳೆದು ಪತ್ರದಿಂ ಕೊಡೆವಿಡಿದು
ಸೆರಗಿಂದೆ ಬೀಸಿ ರಾಮನ ಸೇವೆ ಸಂದುದೇ ತನಗೆಂದು ರೋದಿಸಿದನು

## ಭಾಷಾಭ್ಯಾಸ

**VI. ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗನುಗುಣವಾಗಿ ಉತ್ತರಿಸಿ.** **2x6=12**

43. ಈ ಪದಗಳ ಅರ್ಥ ಬರೆಯಿರಿ : ತಪ್ತ, ಭವ.
44. ಈ ಪದಗಳ ವಿರುದ್ಧಾರ್ಥಗಳನ್ನು ಬರೆಯಿರಿ : ದುರ್ಬಲ, ಲೌಕಿಕ.
45. ಈ ಪದಗಳ ತದ್ಭವ ರೂಪ ಬರೆಯಿರಿ : ಧ್ವನಿ, ಶೃಂಗಾರ.
46. ಈ ಪದಗಳ ನಾನಾರ್ಥಗಳನ್ನು ಬರೆಯಿರಿ : ಊರು, ಕಾಡು
47. ಈ ಪದಗಳನ್ನು ಬಿಡಿಸಿ ಬರೆಯಿರಿ : ಅಲ್ಲಿಗೊಯ್ಯದೆ, ದಿವ್ಯಾನ್ನ.
48. ಈ ನುಡಿಗಟ್ಟುಗಳನ್ನು ಬಳಸಿ ಸ್ವಂತ ವಾಕ್ಯ ರಚಿಸಿ : ಕಣ್ಣರಳಿಸು, ಅಡಿಪಾಯ.
49. ದ್ವಿರುಕ್ತಿಗಳಿಗೆ ಎರಡು ಉದಾಹರಣೆ ಬರೆಯಿರಿ.

**ಆ) ಈ ಕೆಳಗಿನವುಗಳಲ್ಲಿ ಒಂದನ್ನು ಕುರಿತು ಪ್ರಬಂಧವನ್ನು ಬರೆಯಿರಿ.** **5x1=5**

50. ಜಾಗತೀಕರಣ
51. ಯೋಗಾಭ್ಯಾಸ

**ಇ) ಪತ್ರಲೇಖನ : ಈ ಕೆಳಗಿನವುಗಳಲ್ಲಿ ಒಂದನ್ನು ಕುರಿತು ಪತ್ರ ಬರೆಯಿರಿ.** **4x1=4**

52. ನಿಮ್ಮ ಕಾಲೇಜು ಅನುಭವದ ಕುರಿತು ಗೆಳೆಯ/ಗೆಳತಿಗೊಂದು ಪತ್ರ ಬರೆಯಿರಿ.
53. ನಿಮ್ಮ ಪ್ರದೇಶದ ನೆರೆಹಾವಳಿಯಿಂದಾದ ತೊಂದರೆಯನ್ನು ವಿವರಿಸಿ ಜಿಲ್ಲಾಧಿಕಾರಿಗೊಂದು ಪತ್ರ ಬರೆಯಿರಿ.

**ಈ) ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ.** **4x1=4**

54. ಮಾತು ಬೆಳ್ಳಿ, ಮೌನ ಬಂಗಾರ.
55. ಆಳಾಗಬಲ್ಲವನು ಅರಸಾಗಬಲ್ಲ.

########################################